ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

5

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಸಭೆ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ    ದಿನಾಂಕ : DATE : 6/2/2021

# ವಿಧಾನಸಭೆಯಲ್ಲಿ 14 ಮಸೂದೆ ಅಂಗೀಕಾರ

## ಕಲಾಪ ಅನಿರ್ದಿಷ್ಟಾವಧಿಗೆ ಮುಂದೂಡಿಕೆ | 34 ಗಂಟೆ ನಡೆದ ಅಧಿವೇಶನ

6/2/21

• **ಕನ್ನಡಪ್ರಭ ವಾರ್ತೆ** ವಿಧಾನಸಭೆ

ವಿಧಾನಮಂಡಲದ ಉಭಯ ಸದನಗಳ ಜಂಟಿ ಅಧಿವೇಶನ ಪೈಕಿ ವಿಧಾನಸಭೆ ಕಲಾಪ ಅನಿರ್ದಿಷ್ಟಾವಧಿಗೆ ಮುಂದೂಡಲ್ಪಟ್ಟಿದೆ.

ಒಂದು ವಾರಗಳ ಕಾಲ ನಡೆದ ಅಧಿವೇಶನದಲ್ಲಿ 33 ಗಂಟೆ 50 ನಿಮಿಷಗಳ ಕಾಲ ಸದನದ ಕಾರ್ಯಕಲಾಪ ನಡೆಸಲಾಗಿದ್ದು, 14 ವಿಧೇಯಕಗಳನ್ನು ಅಂಗೀಕರಿಸಲಾಗಿದೆ ಎಂದು ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಮಾಹಿತಿ ನೀಡಿದ್ದಾರೆ.



ಸದನ ಅನಿರ್ದಿಷ್ಟಾವಧಿಗೆ ಮುಂದೂಡಿಕೆಗೂ ಮುನ್ನ ಸದನಕ್ಕೆ ಮಾಹಿತಿ ನೀಡಿದ ಅವರು, ರಾಜ್ಯಪಾಲರು ವಿಧಾನಮಂಡಲದ ಉಭಯ ಸದನಗಳ ಸದಸ್ಯರನ್ನುದ್ದೇಶಿಸಿ ಜ.28ರಂದು ಮಾಡಿದ್ದು, ವಂದನಾ ನಿರ್ಣಯದ ಮೇಲೆ ಎಲ್ಲಾ ಪಕ್ಷಗಳ 20 ಸದಸ್ಯರು 12 ಗಂಟೆ 34 ನಿಮಿಷಗಳ ಕಾಲ ಚರ್ಚಿಸಿದರು. ನಿಧನ ಹೊಂದಿದ ಗಣ್ಯರಿಗೆ ಸಂತಾಪ ಸೂಚನಾ ನಿರ್ಣಯ ಮಂಡಿಸಿ ಅಂಗೀಕರಿಸಲಾಗಿದೆ ಎಂದು ಹೇಳಿದರು.

ಗಣರಾಜ್ಯೋತ್ಸವ ವೇಳೆ ರಾಜ್ಯದ ಖ್ಯಾತ ವೈದ್ಯ ವಿಜ್ಞಾನಿ ಡಾ.ಬಿ.ಎಂ.ಹೆಗಡೆ ಅವರಿಗೆ ಪದ್ಮವಿಭೂಷಣ, ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಸಾಹಿತಿ ಡಾ.ಚಂದ್ರಶೇಖರ ಕಂಬಾರ ಅವರಿಗೆ ಪದ್ಮಭೂಷಣ ಮತ್ತು ರಾಜ್ಯದ ಜಾನಪದ ಅಕಾಡೆಮಿ ಅಧ್ಯಕ್ಷೆ ಮಂಜಮ್ಮ ಜೋಗತಿ, ವೇದ ವಿಜ್ಞಾನಿ ಡಾ.ಆರ್.ಎಲ್.ಕಶ್ಯಪ್, ಕ್ರೀಡಾಪಟು ಕೆ.ವೈ. ವೆಂಕಟೇಶ್ ಪದ್ಮಶ್ರೀಗೆ ಭಾಜನರಾಗಿರಾಗಿದ್ದಾರೆ. ಹಿನ್ನೆಲೆ ಗಾಯಕ ಎಸ್.ಪಿ. ಬಾಲಸುಬ್ರಮಣ್ಯಂ ಅವರಿಗೆ ಮರಣೋತ್ತರ ಪದ್ಮವಿಭೂಷಣ ಪ್ರಶಸ್ತಿ ನೀಡಿ ಗೌರವಿಸಿರುವ ಬಗ್ಗೆ ಸದನದ ಪರವಾಗಿ ಅಭಿನಂದನೆ ಸಲ್ಲಿಸಲಾಗಿದೆ ಎಂದರು.

ಲೆಕ್ಕನಿಯಂತ್ರಿಕರು ಮತ್ತು ಮಹಾ ಲೆಕ್ಕಪರಿಶೋಧಕರು ನೀಡಿರುವ ಮಾರ್ಚ್ 2019ಕ್ಕೆ ಕೊನೆಗೊಂಡ ವರ್ಷದ ಸಾರ್ವಜನಿಕ ವಲಯ ಉದ್ಯಮಗಳ ಮೇಲಿನ ವರದಿಯನ್ನು ಸದನದಲ್ಲಿ ಮಂಡಿಸಲಾಗಿದೆ. ವಿಧಾನಸಭೆಯ ಭರವಸೆ ಸಮಿತಿಯ 8ನೇ ವರದಿ ಮತ್ತು 11 ಅಧಿಸೂಚನೆಗಳು, 42 ವಾರ್ಷಿಕ ವರದಿಗಳು, 20 ಲೆಕ್ಕ ಪರಿಶೋಧನಾ ವರದಿಗಳು, 2 ಅನುಷ್ಠಾನ ವರದಿಗಳು, 2 ತಪಾಸಣಾ ವರದಿ ಮತ್ತು 1 ವಿಶೇಷ ವರದಿಯನ್ನು ಮಂಡಿಸಲಾ ಗಿದೆ ಎಂದರು.

## ಮೇಲ್ಮನೆ ಗದ್ದಲದ ಬಗ್ಗೆ 24ಕ್ಕೆ ಆತ್ಮಾವಲೋಕನ ಸಭೆ

**ವಿಧಾನಸಭೆ:** ಪರಿಷತ್‌ನಲ್ಲಿ ನಡೆದ ಗದ್ದಲ, ಗಲಾಟೆ ವಿಚಾರಕ್ಕೆ ಸಂಬಂಧಿಸಿ ಆತ್ಮಾವಲೋಕನ ಮಾಡಿಕೊಳ್ಳುವ ಸಂಬಂಧ ಫೆ.24ರಂದು ಸಭೆ ನಡೆಸಲು ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ತೀರ್ಮಾನಿಸಿದ್ದಾರೆ.

ಸಂಸದೀಯ ಮೌಲ್ಯಗಳ ಕುಸಿತ ಬಗ್ಗೆ ಚರ್ಚಿಸಲು ತೀರ್ಮಾನಿಸಲಾಗಿದೆ. ಹೀಗಾಗಿ ವಿಧಾನಸೌಧದ ಬ್ಯಾಂಕ್ವೆಟ್‌ನಲ್ಲಿ ಸಭೆ ಜರುಗಲಿದೆ. ಸಂಸದೀಯಪಟುಗಳು, ಕಾನೂನು ತಜ್ಞರು, ಹಿರಿಯ ಪತ್ರಕರ್ತರು ಸೇರಿ ವಿವಿಧ ವಲಯದ ಪರಿಣತರು ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ.

ಇತ್ತೀಚಿನ ದಿನಗಳಲ್ಲಿ ಸಂಸದೀಯ ಮೌಲ್ಯಗಳು ಕುಸಿಯುತ್ತಿರುವ ಹಿನ್ನೆಲೆಯಲ್ಲಿ ಚರ್ಚೆ ನಡೆಸಬೇಕಾದ ಅಗತ್ಯ ಇದೆ. ಹೀಗಾಗಿ ಸಮಾಲೋಚನೆ ಸಭೆ ನಡೆಸಲಾಗುತ್ತಿದೆ ಎಂದು ವಿಶ್ವೇಶ್ವರ ಹೆಗಡೆ ಕಾಗೇರಿ ತಿಳಿಸಿದರು.